## ಕರ್ನಾಟಕ ಸರ್ಕಾರ

ಸಂ:ಡಿ.ವೈ.ಇ.ಎಸ್/ಕ್ರೀಚಕಪ್ರೋ/69/2025-26

ಆಯುಕ್ತರ ಕಾರ್ಯಾಲಯ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು-01, ದಿನಾಂಕ: 17-07-2026

## ಸುತ್ತೋಲೆ

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯಕ್ರಮಗಳಡಿ 2025 ನೇ ಸಾಲಿನ ಜೀವಮಾನ ಸಾಧನೆ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸುವ ಕುರಿತು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2026-27 ನೇ ಸಾಲಿನ ಕ್ರೀಡಾ ಕಲ್ಯಾಣ ಯೋಜನೆ ಅಡಿಯಲ್ಲಿ ಅಂತರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅದೀಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ 2025 ನೇ ಸಾಲಿನ, ಜೀವಮಾನ ಸಾಧನೆ ಪ್ರಶಸ್ತಿಗಾಗಿ ಪ್ರೋತ್ಸಾಹಧನ ನೀಡಲು ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.

ಅಸಕ್ತ ಕ್ರೀಡಾಪಟುಗಳು ಅರ್ಜಿಗಳನ್ನು ಅಧಿಕೃತ ಜಾಲತಾಣ: **https://sevasindu.karnataka.gov.in** ಮೂಲಕ ಕಡ್ಡಾಯವಾಗಿ ಆನ್‌ಲೈನ್ ಮೂಲಕ ನಿಗದಿತ ದಿನಾಂಕದೊಳಗೆ ಸಲ್ಲಿಸಲು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಅಂತಿಮ **ದಿನಾಂಕ:31.07.2026 ರಂದು ಕೊನೆಯ ದಿನಾಂಕವಾಗಿರುತ್ತದೆ,** ಈ ಬಗ್ಗೆ ತಮ್ಮ ಜಿಲ್ಲೆಯಲ್ಲಿ ಹೆಚ್ಚು ಪ್ರಚಾರದಲ್ಲಿರುವ ಸ್ಥಳೀಯ ದಿನ ಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಪತ್ರಿಕಾ ವರದಿ ಪ್ರತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ತಿಳಿಸಿದೆ.

**(ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯುವ ಸಹಾಯವಾಣಿ 155265 ಗೆ ಕಛೇರಿ ಅವಧಿಯಲ್ಲಿ ಸಂಪರ್ಕಿಸಲು ಸೂಚಿಸಿದೆ.**

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ,

1. ಮಾನ್ಯ ಉಪಾಧ್ಯಕ್ಷರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಕಂಠೀರವ ಕ್ರೀಡಾಂಗಣ.
2. ಮಹಾನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು.
3. ಅಧ್ಯಕ್ಷರು, ಕರ್ನಾಟಕ ಒಲಂಪಿಕ್ ಸಂಸ್ಥೆ, ಬೆಂಗಳೂರು.
4. ಎಲ್ಲಾ ಜಿಲ್ಲೆಗಳ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
5. ರಾಜ್ಯದ ಎಲ್ಲಾ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು.
6. ಹೆಚ್ಚುವರಿ ಪ್ರತಿ.

## ಜೀವಮಾನ ಸಾಧನೆ ಪ್ರಶಸ್ತಿ ಮಾರ್ಗಸೂಚಿಗಳು

ಕ್ರೀಡಾ ಕ್ಷೇತ್ರದಲ್ಲಿ ರಾಷ್ಟ್ರೀಯ/ಅಂತರಾಷ್ಟ್ರೀಯ ಕ್ರೀಡೆಗಳಲ್ಲಿ ರಾಜ್ಯ/ರಾಷ್ಟ್ರಕ್ಕೆ ಕೀರ್ತಿ ತಂದ ನಿರಂತರವಾಗಿ ಕ್ರೀಡಾ ಕ್ಷೇತ್ರದ ಅಭಿವೃದ್ಧಿಗಾಗಿ ನಿರಂತರ ಶ್ರಮಿಸುತ್ತಿರುವ ತರಬೇತುದಾರರನ್ನು ಗುರುತಿಸಿ ಗೌರವಿಸುವುದು.

1) ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸುವವರು ಕ್ರೀಡಾ ಕ್ಷೇತ್ರದಲ್ಲಿ ರಾಷ್ಟ್ರೀಯ ಮತ್ತು ಅಂತರ್ ರಾಷ್ಟ್ರೀಯ ಕ್ರಿಡೆಗಳಲ್ಲಿ ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸುವ ಕ್ರೀಡಾಪಟುಗಳನ್ನು ಕೊಡುಗೆಯಾಗಿ ನೀಡಿ ಈ ಕ್ರೀಡಾ ಕ್ಷೇತ್ರದಲ್ಲಿ ನಿರಂತರ ಸೇವೆ ಸಲ್ಲಿಸುತ್ತಿರಬೇಕು.

2) ತರಬೇತಿದಾರರು ನಾಯಕತ್ವದ ಗುಣ ಕ್ರೀಡಾ ಮನೋಭಾವ ಮತ್ತು ಶಿಸ್ತು ಬದ್ಧ ಜೀವನಕ್ಕೆ ಮಾದರಿಯಾಗಿರಬೇಕು.

3) ಜೀವಮಾನ ಸಾಧನೆ ಪ್ರಶಸ್ತಿಗೆ ಕರ್ನಾಟಕ ಒಲಂಪಿಕ್ ಸಂಸ್ಥೆ, ವಿವಿಧ ಕ್ರೀಡೆ ರಾಜ್ಯ ಸಂಸ್ಥೆಗಳು, ಇಲಾಖೆಯ ಉಪ/ಸಹಾಯಕ ನಿರ್ದೇಶಕಗಳು ಶಿಫಾರಸ್ಸು ಮಾಡಬಹುದಾಗಿದೆ ಹಾಗೂ ಪ್ರಶಸ್ತಿಗೆ ಅರ್ಜಿಸಲ್ಲಿಸುವವರು ಕರ್ನಾಟಕದವರೆ ಆಗಿರಬೇಕು.

4) ಪ್ರತಿ ವರ್ಷ ಐವರು ಅರ್ಹ ತರಬೇತುದಾರರಿಗೆ ಮಾತ್ರ ಜೀವಮಾನ ಸಾಧನೆ ಪ್ರಶಸ್ತಿ ನೀಡಲಾಗುವುದು ಹಾಗೂ ಆಯ್ಕೆಯ ಅಂತಿಮ ನಿರ್ಧಾರ ರಾಜ್ಯ ಸರ್ಕಾರದ ಆಯ್ಕೆ ಸಮಿತಿಯದಾಗಿರುತ್ತದೆ.

5) ಈ ಪ್ರಶಸ್ತಿಯು ರೂ. 3 ಲಕ್ಷ ನಗದು ಬಹುಮಾನ ನೆನಪಿನ ಕಾಣಿಕೆ, ಪ್ರಮಾಣ ಪತ್ರ, ಶಾಲು,

6) ( ಪುರುಷರಿಗೆ ಪ್ಯಾಂಟು, ಶರ್ಟು, ಟೈ ಬ್ಲೇಜರ್, ಶೂ ಮತ್ತು ಮಹಿಳೆಯರಿಗೆ ಮೈಸೂರು ಸಿಲ್ಕ್ ಸ್ಯಾರಿ, ಬ್ಲೇಜರ್, ಚಪ್ಪಲ್, ಸ್ಟೋಲ್ ಗಳನ್ನು ಒಳಗೊಂಡಿರುತ್ತದೆ

7) ರಾಷ್ಟ್ರೀಯ ಮತ್ತು ಅಂತರ್ರಾಷ್ಟ್ರೀಯ/ ಕ್ರೀಡಾಪಟುಗಳನ್ನು ತರಬೇತಿಗೊಳಿಸಿದ ಕರ್ನಾಟಕದ ತರಬೇತುದಾರರು ಅರ್ಜಿ ಸಲ್ಲಿಸಲು ಆರ್ಹರಾಗಿರುತ್ತಾರೆ.

8) ರಾಷ್ಟ್ರೀಯ/ ಅಂತರಾಷ್ಟ್ರೀಯ ಕ್ರೀಡೆಗಳು ನಡೆದ ಸಂದರ್ಭದಲ್ಲಿ ಕ್ರೀಡಾಪಟು ಹಾಗೂ ಸಂಬಂಧಿಸಿದ ತರಬೇತುದಾರರ ಬಗ್ಗೆ ಉದ್ದೀಪನ ಮದ್ದು ಸೇವನೆ ಆರೋಪ ಹಾಗೂ ಪ್ರಚೋದನೆ ಬಗ್ಗೆ NADA/WADA ತನಿಖಾ ವರದಿಯಲ್ಲಿ ಉಲ್ಲೇಖಿತವಾಗಿದ್ದಲ್ಲಿ ಅಂತಹ ತರಬೇತುದಾರರು ಈ ಪ್ರಶಸ್ತಿಗೆ ಆರ್ಹರಾಗಿರುವುದಿಲ್ಲ.

9) ಈ ಪ್ರಶಸ್ತಿಗೆ ತರಬೇತುದಾರರು ಅರ್ಹತೆಯನ್ನು ಪರಿಗಣಿಸುವಾಗ ಈ ಕೆಳಕಂಡ ಅಂಶಗಳನ್ನು ಪರಿಗಣಿಸಲಾಗುವುದು.

ಅ) ತರಬೇತುದಾರರು ತಮ್ಮ ತರಬೇತಿ ಅವಧಿಯಲ್ಲಿ ರಾಷ್ಟ್ರೀಯ/ ಅಂತರ್ ರಾಷ್ಟ್ರೀಯ ಮಟ್ಟದಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳನ್ನು ಬೆಳಸಿರಬೇಕು.

ಆ) ಅಂತರ್ ರಾಷ್ಟ್ರೀಯ ಮಟ್ಟದ ಕ್ರೀಡೆಗಳಾದ ಒಲಂಪಿಕ್ ಕ್ರೀಡೆಗಳು, ವಿಶ್ವ ಚಾಂಪಿಯನ್ ವಿಶ್ವ ಕಪ್ ಕ್ರೀಡೆಗಳಲ್ಲಿ ಭಾಗವಹಿಸಿ ಕರ್ನಾಟಕವನ್ನು ಪ್ರತಿನಿಧಿಸಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ಸಾಧನೆಯಾಗಿರಬೇಕು.

ಇ) ಗುಂಪು ಕ್ರಿಡೆಗಳಲ್ಲಿ ತರಬೇತುದಾರರು ರಾಷ್ಟ್ರೀಯ/ಅಂತರ್ ರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ಕರ್ನಾಟಕವನ್ನು ಪ್ರತಿನಿಧಿಸಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ತರಬೇತಿ ನೀಡದ ಸಾಧನೆ ಪರಿಗಣಿಸಲಾಗುವುದು.

ಈ) ಕನಿಷ್ಠ ಪಕ್ಷ 20 ವರ್ಷ ತರಬೇತುದಾರರಾಗಿ ಸೇವೆ ಸಲ್ಲಸಿರಬೇಕು.

ಕ್ರೀಡಾ ಕ್ಷೇತ್ರದಲ್ಲಿ ಜೀವಮಾನ ಪ್ರಶಸ್ತಿಗೆ ಆಯ್ಕೆ ಮಾಡಲು ನಿಗಧಿ ಪಡಿಸುವ ಅಂಕಗಳ ಆಧಾರದಲ್ಲಿ ಪರಿಗಣಿಸಲಾಗುವುದು.

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.